ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 26, 2020**

# ಪತ್ರಿಕಾ ಪ್ರಕಟಣೆ

## ಪಕ್ಷಾಂತರ ನಿಷೇಧ ಕಾಯಿದೆ : ಮೇ 28 ರಂದು ಸಂಸದೀಯ ಗಣ್ಯರ ಸಭೆ

ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ ) :

ಪಕ್ಷಾಂತರ ನಿಷೇಧ ಕಾಯಿದೆಗೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಹತ್ತನೇ ಅನುಸೂಚಿಯಲ್ಲಿ ಪೀಠಾಸೀನ ಅಧಿಕಾರಿಗಳಿಗೆ ಲಭ್ಯವಿರುವ ಅಧಿಕಾರಗಳು ಹಾಗೂ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಕುರಿತಂತೆ ಅಭಿಪ್ರಾಯ ಪಡೆಯಲು ಮೇ 28 ರಂದು ಗುರುವಾರ ಬೆಳಿಗ್ಗೆ 10–30 ಗಂಟೆಗೆ ವಿಧಾನ ಸೌಧದ ಮೊದಲನೆಯ ಮಹಡಿಯಲ್ಲಿರುವ ಸಮಿತಿ ಕೊಠಡಿಯಲ್ಲಿ ಸಂಸದೀಯ ಗಣ್ಯರ ಸಭೆ ನಡೆಯಲಿದೆ.

ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಭೆಯಲ್ಲಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ, ರಾಜ್ಯ ವಿಧಾನ ಸಭೆಯ ಉಪ ಸಭಾಧ್ಯಕ್ಷ ಆನಂದ ಚಂದ್ರಶೇಖರ ಮಾಮನಿ, ರಾಜ್ಯ ವಿಧಾನ ಸಭೆಯ ಸರ್ಕಾರದ ಮುಖ್ಯ ಸಚೇತಕ ವಿ ಸುನೀಲ್ ಕುಮಾರ್, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಖಾತೆಗಳ ಹೊತ್ತ ಉಪ ಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ ಸಿ ಮಾಧುಸ್ವಾಮಿ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್ ಸುರೇಶ್ ಕುಮಾರ್, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಶಾಸಕರಾದ ಕೆ ಜಿ ಬೋಪಯ್ಯ, ಉಮೇಶ್ ವಿಶ್ವನಾಥ ಕತ್ತಿ ಹಾಗೂ ಅರವಿಂದ ಲಿಂಬಾವಳಿ ಅವರು ಭಾರತೀಯ ಜನತಾ ಪಕ್ಷದ ಪ್ರತಿನಿಧಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ರಾಜ್ಯ ವಿಧಾನ ಸಭೆಯ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಡಿ ಕೆ ಶಿವಕುಮಾರ್, ಶಾಸಕರಾದ ಕೆ ಆರ್ ರಮೇಶ್ ಕುಮಾರ್, ಆರ್ ವಿ ದೇಶಪಾಂಡೆ, ಹೆಚ್ ಕೆ ಪಾಟೀಲ್, ಕೃಷ್ಣ ಬೈರೇಗೌಡ, ಅಜಯ್ ಧರ್ಮಸಿಂಗ್ ಮತ್ತು ಡಾ ಜಿ ಪರಮೇಶ್ವರ್ ಅವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್

ಪಕ್ಷದ ಪ್ರತಿನಿಧಿಗಳಾಗಿ ಹಾಗೂ ಜಾತ್ಯಾತೀತ ಜನತಾದಳದ ರಾಜ್ಯಾಧ್ಯಕ್ಷ ಹೆಚ್ ಕೆ ಕುಮಾರಸ್ವಾಮಿ, ಶಾಸಕರಾದ ಹೆಚ್ ಡಿ ಕುಮಾರಸ್ವಾಮಿ, ಎಂ ಕೆ ಶಿವಲಿಂಗೇಗೌಡ, ವೆಂಕಟರಾವ್ ನಾಡಗೌಡ ಮತ್ತು ಎ. ಟಿ. ರಾಮಸ್ವಾಮಿ ಅವರು ಜಾತ್ಯಾತೀತ ಜನತಾದಳ ಪಕ್ಷದ ಪ್ರತಿನಿಧಿಗಳಾಗಿ ಭಾಗವಹಿಸಲಿದ್ದಾರೆ.

ಅಲ್ಲದೆ, ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ ನಾವಡಗಿ ಮತ್ತು ಕಾನೂನು ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಎಸ್ ವೈ ವಟವಟಿ ಅವರೂ ಸಭೆಯಲ್ಲಿ ಹಾಜರಿರುತ್ತಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

---

ಡಿ ಪಿ ಎಂ

## ಸಚಿವರ ಪ್ರವಾಸ

**ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ )**

ಕಂದಾಯ  ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಆರ್. ಅಶೋಕ್ ಅವರು ಮೇ 27 ರಂದು  ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಮಾಹಿತಿ ಆಯೋಗದಲ್ಲಿ ವೀಡಿಯೊ ಕಾನ್ಫರೆನ್ಸ್ ಮೂಲಕ ಪ್ರಕರಣ ವಿಚಾರಣೆ

**ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ )**

ಕರ್ನಾಟಕ ಮಾಹಿತಿ ಆಯೋಗದಲ್ಲಿ ದಾಖಲಾಗಿರುವ ದ್ವಿತೀಯ ಮೇಲ್ಮನವಿಗಳ ವಿಚಾರಣೆಯನ್ನು ಮರು ಪ್ರಾರಂಭಿಸಲಾಗಿದೆ. ಕೊರೊನಾ ವೈರಸ್ (ಕೋವಿಡ್–19) ಸೋಂಕು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ವಿಚಾರಣೆ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ತಾತ್ಕಾಲಿಕ ಕ್ರಮವಾಗಿ ವಿಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯ ಸಭಾಂಗಣ–1ರಲ್ಲಿನ ಪ್ರಕರಣದ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಾಯಿತು.

ಈ ಪ್ರಯತ್ನದ ಅಂಗವಾಗಿ ಮಾನ್ಯ ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾದ  ಎನ್.ಸಿ. ಶ್ರೀನಿವಾಸ ರವರು ಎಸ್.ನಾರಾಯಣಸ್ವಾಮಿ, ಕೋಲಾರ ಜಿಲ್ಲೆ ರವರು  ದಾದಾಪೀಠ ಟಿ.ಎಸ್. ಕಾರ್ಯದರ್ಶಿ ಮತ್ತು ಸಾರ್ವಜನಿಕ

ಮಾಹಿತಿ ಅಧಿಕಾರಿ, ಬೆಂಗನೂರು(ಕೆಸರನಹಳ್ಳಿ) ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ ರವರ ವಿರುದ್ಧ ಸಲ್ಲಿಸಿರುವ ದ್ವಿತೀಯ ಮೇಲ್ಮನವಿಯ ವಿಚಾರಣೆಯನ್ನು ವಿಡಿಯೋ ಕಾನ್ಪರೆಸ್ ಮೂಲಕ ನಡೆಸಿದರು.

ಸದರಿ ವಿಚಾರಣೆ ಕಾಲಕ್ಕೆ ಮೇಲ್ಮನವಿದಾರರು ಮತ್ತು ಪ್ರತಿವಾದಿಗಳು ವಿಡಿಯೋ ಕಾನ್ಪರೆನ್ಸ್ ಮೂಲಕ ವಿಚಾರಣೆಗೆ ಹಾಜರಾಗಿರುತ್ತಾರೆ. ವಿಚಾರಣೆ ಕಾಲಕ್ಕೆ ಮೇಲ್ಮನವಿದಾರರು ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 6(1) ರಡಿ ಕೋರಿದ ಮಾಹಿತಿಗಳನ್ನು ಒದಗಿಸಲು ಪ್ರತಿವಾದಿಗಳು ವಿನಾಕಾರಣ ಕಾಲವಿಳಂಬ ಮಾಡಿರುವ ಬಗ್ಗೆ ತೀವ್ರವಾಗಿ ಆಕ್ಷೇಪಿಸಿ, ಸದರಿ ಮಾಹಿತಿಗಳನ್ನು ಒಂದು ವಾರದೊಳಗಾಗಿ ಮೇಲ್ಮನವಿದಾರರಿಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿ, ಆ ಬಗ್ಗೆ ಸೂಕ್ತ ವರದಿಯನ್ನು ದಾಖಲೆಗಳೊಂದಿಗೆ ಆಯೋಗಕ್ಕೆ ಸಲ್ಲಿಸುವಂತೆಯೂ, ತಪ್ಪಿದಲ್ಲಿ ಕಾನೂನು ರೀತ್ಯ ಸೂಕ್ತ ದಂಡನೆಯ ಮತ್ತು ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿ ಪ್ರಕರಣವನ್ನು ದಿನಾಂಕ:04-06-2020ಕ್ಕೆ ಮುಂದೂಡಲಾಯಿತು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ನೀರಿನ ಬಿಲ್ ಪಾವತಿ

ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ )

ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. ಕಾಲರಾ ಮತ್ತು ಜಿ.ಇ. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.05.2020 ರಿಂದ 25.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ.

ದಿನಾಂಕ 01.05.2020 ರಿಂದ 25.05.2020 ರವರೆಗೆ ದಾಖಲುಗೊಂಡ ಒಟ್ಟು 46 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 03 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 37 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 36 ಮಾದರಿಗಳ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ. 01 ಮಾದರಿಯ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 06 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

<u>ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿರುತ್ತದೆ ಹಾಗೂ ಮಂಡಳಿಯ ಆ್ಯಪ್ ಆಗಿರುವ **"BWSSB Payment App"** ಮುಖಾಂತರ **Quick Pay**</u>

ಮಾಡಬಹುದಾಗಿರುತ್ತದೆ. ಮಂಡಳಿಯ ವೆಬ್‌ಸೈಟ್‌ನಲ್ಲಿ "BWSSB Payment App" ನ ಲಿಂಕ್ ಲಭ್ಯವಿದ್ದು, Google Play store ನಲ್ಲಿಯೂ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)¤ಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ನೀರಿನ ಬಿಲ್ ಪಾವತಿಯನ್ನು ಮಾಡಬಹುದಾಗಿರುತ್ತದೆ. ಅಲ್ಲದೆ ಜಲಮಂಡಳಿ ಕಛೇರಿಗಳ ಆವರಣದಲ್ಲಿರುವ ಕಿಯೋಸ್ಕ್ ಮಿಷನ್‌ಗಳಲ್ಲಿ ಹಾಗೂ ಬೆಂಗಳೂರು ಒನ್ ಸೇವಾ ಕೇಂದ್ರದ ಮುಖಾಂತರವೂ ಸಹ ಹಣ ಪಾವತಿ ಮಾಡಬಹುದಾಗಿರುತ್ತದೆ

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Publishing the details about steps taken to prevent cholera and water bill payment

BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.05.2020 to 25.05.2020 tested the samples and results of the samples are enclosed with this letter. The abstract of the result is as mentioned below.

Among the 46 cases reported from 01.05.2020 to 25.05.2020, samples from 03 area was not collected since water supply for that area was not on the day when the water sample were collected, samples from 37 area were collected and result of **36 sample was obtained as suitable for potable purpose(SPP). 01 Sample Result awaited**, The areas of remaining 06 cases does not comes under BWSSB limits.

**All consumers are requested to make payment through the BWSSB official website: www.bwssb.gov.in. BWSSB's App called "BWSSB Payment App" is also available and Quick Pay can be made through this app. Customers can login to the app via the link provided in BWSSB official website and app can also be downloaded from Google pay store. Payment can also be made through online services of BBPS (Bharath Bill Payment System) like Paytm, Phone pe, Google pay etc**. and in Bangalore one and KIOSK Machines at BWSSB Office Premises.

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **website :www.bwssb.gov.in .**

## ಕೆ.ಓ.ಎಸ್. ಪರೀಕ್ಷೆ ಪ್ರಕಟ

**ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ )**

**ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್. ಪರೀಕ್ಷೆಗಳನ್ನು 6–7–2020 ರಿಂದ 15–07–2020 ರವರೆಗೆ ನಿಗಧಿತ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುವುದು ಎಂದು ನಿರ್ದೇಶಕರು(ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಶಿಕ್ಷಕರು ನೂತನ ವರ್ಗಾವಣೆ ನೀತಿ ರೂಪುಗೊಳ್ಳುವವರೆಗು ಪ್ರಸ್ತುತ ಸ್ಥಳದಲ್ಲೇ ಮುಂದುವರೆಸಲು ಸೂಚನೆ

**ಬೆಂಗಳೂರು, ಮೇ 26 ( ಕರ್ನಾಟಕ ವಾರ್ತೆ )**

ನೂತನ ಶಿಕ್ಷಕರ ವರ್ಗಾವಣಾ ನಿಯಂತ್ರಣಾ ಕಾಯ್ದೆಯ ನಿಯಮಗಳು ರೂಪುಗೊಳ್ಳುತ್ತಿದ್ದು, ಈ ನಿಯಮಗಳ ಆಧಾರದಲ್ಲಿ ಪ್ರಸಕ್ತ ಸಾಲಿನ ಶಿಕ್ಷಕರ ವರ್ಗಾವಣಾ ವೇಳಾಪಟ್ಟಿ ಪ್ರಕಟಿಸಬೇಕಾಗಿದೆ. ಹಾಗಾಗಿ ಪ್ರಸ್ತುತ ರಾಜ್ಯದ ವಿವಿಧ ಸರ್ಕಾರಿ ಶಾಲೆಗಳಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ಹಾಗೆಯೇ ಈ ಶೈಕ್ಷಣಿಕ ಸಾಲಿನಲ್ಲಿ ಕಡ್ಡಾಯವಾಗಿ ವರ್ಗಾವಣೆಗೊಳಗಾದ ಮತ್ತು ವರ್ಗಾವಣೆ ಹಿನ್ನೆಲೆಯಲ್ಲಿ ಸೇವೆಯಿಂದ ಬಿಡುಗಡೆ ಹೊಂದದಿರುವ ಶಿಕ್ಷಕರನ್ನುಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲೇ ಮುಂದಿನ ಆದೇಶದವರೆಗೆ ಮುಂದುವರೆಸಬೇಕೆಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಸೂಚಿಸಿದ್ದಾರೆ.